ಬಿ.ಎ. ಸಮಾಜಶಾಸ್ತ್ರ ಪರೀಕ್ಷೆ ಮುಂದೂಡಿಕೆ

ಬಳ್ಳಾರಿ: ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯದ ವ್ಯಾಪ್ತಿಯ ಕಾಲೇಜುಗಳಲ್ಲಿ ಮಂಗಳವಾರ ನಿಗದಿಯಾಗಿದ್ದ ಬಿ.ಎ ಮೂರನೇ ಸೆಮಿಸ್ಟರ್ ಸಾಮಾಜಶಾಸ್ತ್ರ ಪರೀಕ್ಷೆಯನ್ನು ಮುಂದೂಡಲಾಗಿದೆ.

ಮೂರನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಒಂದನೇ ಸೆಮಿಸ್ಟರ್‌ನ ಪ್ರಶ್ನೆ ಪತ್ರಿಕೆಗಳನ್ನು ಕೊಡಲಾಗಿತ್ತು. ಈ ವಿಷಯವನ್ನು ವಿ.ವಿ ವ್ಯಾಪ್ತಿಯ ಕಾಲೇಜುಗಳು ಕುಲಸಚಿವರ ಗಮನಕ್ಕೆ ತಂದಿದ್ದವು. ಹೀಗಾಗಿ, ಕೂಡಲೇ ಪರೀಕ್ಷೆ ರದ್ದು ಮಾಡಲಾಯಿತು. ಪರೀಕ್ಷೆ ನಡೆಯುವ ಮುಂದಿನ ದಿನವನ್ನು ತಿಳಿಸುವುದಾಗಿ ಕಾಲೇಜುಗಳಿಗೆ ವಿ.ವಿ ಸುತ್ತೋಲೆ ರವಾನಿಸಿದೆ.

ರಿಜಿಸ್ಟ್ರಾರ್ (ಮೌಲ್ಯಮಾಪನ) ಪ್ರೊ ರಮೇಶ್ ಓಲೇಕಾರ್ ಮಾತನಾಡಿ, ಪ್ರಶ್ನೆಪತ್ರಿಕೆ ದೋಷ ಕಂಡು ಬಂದ ಕೂಡಲೇ ಪರೀಕ್ಷೆ ರದ್ದು ಮಾಡಲಾಯಿತು. ನಿಗದಿತ ಎಲ್ಲ ಪರೀಕ್ಷೆಗಳೂ ಮುಗಿದ ಬಳಿಕ ಸದ್ಯ ರದ್ದಾಗಿರುವ ಸಮಾಜಶಾಸ್ತ್ರ ಪರೀಕ್ಷೆ ನಡೆಸಲಾಗುವುದು. ಲೋಪಕ್ಕೆ ಕಾರಣ ಏನು ಎಂಬುದರ ಕುರಿತು ತನಿಖೆ ನಡೆಸಿ, ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ. ವಿದ್ಯಾರ್ಥಿಗಳಿಗೆ ಯಾವುದೇ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಮಾವು ಮೇಳದಲ್ಲಿ ಗಮನ ಸೆಳೆದ ಮಿಯಾ ಜಾಕಿ ಮಾವು

ಧಾರವಾಡ: ವಿಶ್ವದ ಅತ್ಯಂತ ದುಬಾರಿಯಾದ ಕೆ.ಜಿ.ಗೆ 2.5 ಲಕ್ಷ ರು.ಗಳ ಮಾವಿನ ಹಣ್ಣು ಮಿಯಾ ಜಾಕಿ ಧಾರವಾಡದ ಮಾವುಮೇಳದಲ್ಲಿ ಗಮನ ಸೆಳೆಯುತ್ತಿದೆ.



ತೋಟಗಾರಿಕೆ ಇಲಾಖೆ ಆವರಣದಲ್ಲಿ ಮಂಗಳವಾರದಿಂದ ಆರಂಭಗೊಂಡಿರುವ ಮಾವು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಕಳಶ ಪ್ರಾಯವಾಗಿ ಸುದ್ದಿಯಲ್ಲಿದೆ. ಈ ದುಬಾರಿ ಮಾವು ಕಲಕೇರಿ ಮಾವು ಬೆಳೆಗಾರ ಪ್ರಮೋದ ಗಾಂವಕರ ತೋಟದ ಮಾವು ಇದಾಗಿದ್ದು, ಈ ತಳಿಯ ಮಾವು ಈಗ ಮೇಳದಲ್ಲಿ ಇದೆ ಮೊದಲ ಬಾರಿಗೆ ಪ್ರದರ್ಶನಕ್ಕೆ ಇಡಲಾಗಿದೆ. ಮೂರು ದಿನಗಳ ಆಯೋಜಿಸಿರುವ ಮಾವು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಮಂಗಳವಾರ ಚಾಲನೆ ದೊರೆತಿದೆ. ಕಳೆದ ನಾಲ್ಕು ವರ್ಷಗಳಿಂದ ರದ್ದಾಗುತ್ತಲೇ ಬಂದಿದ್ದ ಮಾವು ಮೇಳವು ಈ ಸಲ ಮಾವು ಬೆಳೆಗಾರರ ಒತ್ತಾಸೆಯಂತೆ ಆಯೋಜನೆಗೊಂಡಿದೆ. ಶುಗರ ಬೇಬಿ, ಗೋವಾ ಮನಕೂರ, ಸಿಂಧು, ರತ್ನಾ, ಸುವರ್ಣ ರೇಖಾ ಸೇರಿದಂತೆ ಮೇಳದಲ್ಲಿ 52 ವಿವಿಧ ಮಾವು ತಳಿಗಳ ಪ್ರದರ್ಶನ ಗಮನ ಸೆಳೆದಿದೆ.

ಜಸ್ಟ್ ಪಾಸ್: ಬ್ಯಾನರ್ ಹಾಕಿ ಸಂಭ್ರಮಿಸಿದ ಫ್ರೆಂಡ್ಸ್

ಮಂಗಳೂರು: ನಿಜ, ಕೆಲವರಿಗೆ ಪರೀಕ್ಷೆಯಲ್ಲಿ ಅತ್ಯಧಿಕ ಅಂಕ ಗಳಿಸಿದರೆ ಸಾಧನೆ, ಇನ್ನು ಕೆಲವರಿಗೆ ತೇರ್ಗಡೆಯಾದರೆ ಅದೇ ಸಾಧನೆ. ನಿಜದ ಅರ್ಥದಲ್ಲಿ ಎರಡೂ ಸಂಭ್ರಮವೇ, ಆದ್ಯತೆಯೆ ಬೇರೆ. ಕುಡುಪಿನ ಮಂಗಳಾನಗರದಲ್ಲಿ ಇಂಥದ್ದೇ ಒಂದು

ಅಪರೂಪದ ಸಂಭ್ರಮಾಚರಣೆ ನಡೆದಿದೆ. ಇತ್ತೀಚೆಗೆ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಪಾಸಾಗಿದ್ದಕ್ಕೇ (ಜಸ್ಟ್ ಪಾಸ್) ವಿದ್ಯಾರ್ಥಿಯೋರ್ವನಿಗೆ ಯುವ ಫ್ರೆಂಡ್ಸ್ ಗೆಳೆಯರು ಹಿತೈಷಿಗಳು ಸೇರಿ ಬ್ಯಾನರ್ ಹಾಕಿ ಅಭಿನಂದಿಸಿದ್ದಾರೆ.

ವಿದ್ಯಾರ್ಥಿಯ ಫೋಟೊ ಇರುವ ಬ್ಯಾನರ್‌ನಲ್ಲಿ ಆತನಿಗೆ ಅಭಿನಂದನೆಗಳನ್ನು ಸಲ್ಲಿಸಿ ಪಕ್ಕದಲ್ಲೇ ಸಂಭ್ರಮಿಸುವ ಇಮೋಜಿ ಹಾಕಲಾಗಿದೆ. ಅಪ್ಪ ಅಮ್ಮನ ಆಶೀರ್ವಾದದಿಂದ, ಊರವರ ಬೈಗುಳದಿಂದ, ಊರವರ ಪ್ರೋತ್ಸಾಹದಿಂದ, ಟ್ಯೂಷನ್ ಮಹಾತ್ಮೆಯಿಂದ, ಶಾಲೆಯ ಕಿರಿಕಿರಿಯಿಂದ, ಶಿಕ್ಷಕರ ಬೋಧನೆಯಿಂದ, ಸೈಕಲ್, ಕ್ರಾಕ್ಸ್, ಪಿಯುಸಿ, ಫೀಸ್ ಆಮಿಷದಿಂದ, ಬ್ರೂಸ್ಲಿ ಪಾಸೋ ಫೇಲೋ ಎಂಬುದಕ್ಕೆ ಇಂದು ಆ ಚರ್ಚೆಗೆ ತೆರೆ ಬಿದ್ದಿದೆ. ತೋಚಿದ್ದು ಗೀಚಿ ಫೈಲ್ ಆಗುವವನು ಹರಕೆ ಬಲದಿಂದ, ಪ್ರಯತ್ನದ ಫಲದಿಂದ–ಹೇಗೂ ಒಟ್ಟಾರೆ ನಮ್ಮ ಬ್ರೂಸ್ಲಿ ಜಸ್ಟ್ ಪಾಸಾಗಿರೋದೇ ನಮಗೆಲ್ಲ ಸಂಭ್ರಮ ಎಂದು ಅಭಿನಂದಿಸಲಾಗಿದೆ.

ವಿದ್ಯಾರ್ಥಿಗಳ ನೋಂದಣಿಗೆ ‘ಮಾರ್ಗಸೂಚಿ’ ಪ್ರಕಟ

ಬೆಂಗಳೂರು: 2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ಕ್ಕೆ ಪುನರಾವರ್ತಿತ ಮತ್ತು ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ನೊಂದಣಿ ಮಾಡಿಕೊಳ್ಳುವ ಕುರಿತು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಮಾರ್ಗಸೂಚಿ ಪ್ರಕಟಿಸಿದೆ.

ಈಗಾಗಲೇ ಪರೀಕ್ಷೆ–1ಕ್ಕೆ ನೋಂದಾಯಿಸಿಕೊಂಡು ಪರೀಕ್ಷೆಗೆ ಗೈರು ಹಾಜರಾದ, ಎಸ್‌ಎಸ್‌ಎಲ್‌ಸಿ ಪೂರ್ಣಗೊಳಿಸದ, ಅನುತ್ತೀರ್ಣರಾದ ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳಿಗೆ 2024ರ ಜೂನ್ ತಿಂಗಳಲ್ಲಿ ಪರೀಕ್ಷೆ–2ನ್ನು ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. 2002–03 ರಿಂದ 2023–24ರವರೆಗೂ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಪೂರ್ಣಗೊಳಿಸಿಲ್ಲದವರು, 2024ರ ಪರೀಕ್ಷೆ–1ಕ್ಕೆ ನೋಂದಾಯಿಸಿಕೊಂಡು ಗೈರು ಹಾಜರಾಗಿರುವ ಅರ್ಹ ಅಭ್ಯರ್ಥಿಗಳು ಸೇರಿ ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ಕೂಡ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಪ್ರೌಢಶಾಲಾ ಮುಖ್ಯೋಪಾಧ್ಯಾಯರನ್ನು ಭೇಟಿ ಮಾಡಬಹುದು ಅಥವಾ ಮಂಡಳಿಯ ವೆಬ್‌ಸೈಟ್ https://kseab.karnataka.gov.in ಅನ್ನು ಸಂಪರ್ಕಿಸಬಹುದಾಗಿದೆ ಎಂದು ಮಂಡಳಿ ತಿಳಿಸಿದೆ.

ಸಮಾಚಾರ ಸಣ್ಣದಲ್ಲ

ಬಸ್‌ಗೆ ಬೆಂಕಿ: ಪ್ರಯಾಣಿಕರು ಪಾರು

ಚಿಕ್ಕಮಗಳೂರು: ತರೀಕೆರೆ ಸಮೀಪದ ಅಜ್ಜಂಪುರ ಕ್ರಾಸ್‌ನಲ್ಲಿ ಮಂಗಳವಾರ ನಸುಕಿನ ಜಾವ 1.30ರ ವೇಳೆಗೆ ಕೆಎಸ್‌ಆರ್‌ಟಿಸಿಯ ಐರಾವತ ಬಸ್‌ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಅದೃಷ್ಟವಶಾತ್

ಬಸ್‌ನಲ್ಲಿದ್ದ ಎಲ್ಲ ಪ್ರಯಾಣಿಕರು ಯಾವುದೇ ಅಪಾಯ ಇಲ್ಲದೇ ಪಾರಾ ಗಿದ್ದಾರೆ. ಶಿವಮೊಗ್ಗದಿಂದ ಮೈಸೂರು ಕಡೆಗೆ ಹೊರಟಿದ್ದ ಕೆಎ 01 ಎಫ್ 9077 ಸಂಖ್ಯೆಯ ಬಸ್‌ನಲ್ಲಿ ಸಿಬ್ಬಂದಿ ಸೇರಿ ಒಟ್ಟು 40 ಜನ ಪ್ರಯಾಣಿಸುತ್ತಿದ್ದರು. ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿತು. ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಬಸ್ ಚಾಲಕ ಬಸ್ ನಿಲ್ಲಿಸಿ ಎಲ್ಲ ಪ್ರಯಾಣಿಕರನ್ನು ಕೆಳಗೆ ಇಳಿಸಿದರು. ಅಗ್ನಿಶಾಮಕ ಅಧಿಕಾರಿ ತಿಪ್ಪೇಸ್ವಾಮಿ ನೇತೃತ್ವದಲ್ಲಿ ಬೆಂಕಿಯನ್ನು ನಂದಿಸಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಬಸ್ ಚಾಲಕ ಜಾಗರೂಕತೆ ವಹಿಸಿದ್ದರಿಂದ ಯಾವುದೇ ಜೀವ ಹಾನಿ ಸಂಭವಿಸಿಲ್ಲ ಎಂದು ಅವರು ಹೇಳಿದ್ದಾರೆ.

ಕಾಡಾನೆಗಳ ದಾಳಿ: ಬೆಳೆ ಹಾನಿ

ಸಕಲೇಶಪುರ: ತಾಲೂಕಿನ ಆಲುವಳ್ಳಿ ಗ್ರಾಮದಲ್ಲಿ ಕಾಡಾನೆಗಳ ದಾಳಿಯಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಬೆಳೆ ಹಾಗೂ ಆಸ್ತಿಪಾಸ್ತಿ ಹಾನಿಯಾಗಿದೆ.

ಜಮೀನಿಗೆ ನುಗ್ಗಿದ ಕಾಡಾನೆಗಳು ಸುಮಾರು 200ಕ್ಕೂ ಹೆಚ್ಚು ಅಡಿಕೆ ಮರಗಳನ್ನು, 50ಕ್ಕೂ ಹೆಚ್ಚು ಕಾಫಿ ಗಿಡಗಳನ್ನು, ಏಲಕ್ಕಿ, ಬಾಳೆ ಹಾಗೂ ಇನ್ನಿತರ ಬೆಳೆಗಳನ್ನು ನಾಶ ಮಾಡಿವೆ ಎಂದು ರೈತ ಧರ್ಮೇಗೌಡ ಅಳಲು ತೋಡಿಕೊಂಡಿದ್ದಾರೆ. ನೀರು ಹಾಯಿ ಸುವ ಪೈಪ್‌ಗಳನ್ನು ಸಹ ತುಳಿದು ಪುಡಿ ಮಾಡಿ ಭಾರೀ ಪ್ರಮಾಣದ ನಷ್ಟ ಉಂಟುಮಾಡಿದೆ ಎಂದು ತಿಳಿಸಿದ್ದಾರೆ.

ಹೃದಯಾಘಾತದಿಂದ ಕಾರ್ಮಿಕ ಸಾವು

ಹಗರಿಬೊಮ್ಮನಹಳ್ಳಿ: ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಾಲವಿ ಜಲಾಶಯದಲ್ಲಿ ನರೇಗಾ ಯೋಜನೆಯಲ್ಲಿ ಹೂಳೆತ್ತುವ ಕಾಮಗಾರಿ ನಿರ್ವಹಿಸುವಾಗ ಕೂಲಿ

ಕಾರ್ಮಿಕರೊಬ್ಬರು ಮಂಗಳವಾರ ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಮಸಾರಿ ನೆಲ್ಕುದ್ರಿ ಗ್ರಾಮದ ಕಡ್ಲಿ ರಾಘವೇಂದ್ರ(45) ಮೃತ ಕೂಲಿ ಕಾರ್ಮಿಕ. ತೀವ್ರ ಎದೆನೋವು ಅವರು ಸ್ಥಳದಲ್ಲಿ ಕುಸಿದು ಬಿದ್ದರು. ಅವರನ್ನು ತಾಲೂಕು ಆಸ್ಪತ್ರೆಗೆ ಕರೆದು ತರಲಾಯಿತು, ಚಿಕಿತ್ಸೆಗೆ ಸ್ಪಂದಿಸದೇ ಮೃತಪಟ್ಟಿದ್ದಾರೆಂದು ನರೇಗಾ ಸಹಾಯಕ ನಿರ್ದೇಶಕ ರಮೇಶ್ ಮಹಾಲಿಂಗಪುರ ತಿಳಿಸಿದ್ದಾರೆ.

ಮೋದಿ ಮತ್ತೊಮ್ಮೆ ಪ್ರಧಾನಿ: ಸುಧಾಕರ್

ಬಾಗೇಪಲ್ಲಿ: ಆಂಧ್ರಪ್ರದೇಶದಲ್ಲಿ ಎನ್‌ಡಿಎ ಮೈತ್ರಿ ಕೂಟದ ಸರಕಾರ ರಚನೆಯಾಗುವ ವಿಶ್ವಾಸವಿದೆ. ಹಾಗೆಯೇ ಕೇಂದ್ರದಲ್ಲಿ ಮತ್ತೊಮ್ಮೆ ಮೋದಿ ಪ್ರಧಾನಿಯಾಗಲಿದ್ದಾರೆ ಎಂದು ಮೈತ್ರಿ ಅಭ್ಯರ್ಥಿ ಡಾ.ಕೆ ಸುಧಾಕರ್ ತಿಳಿಸಿದರು. ಪಟ್ಟಣದ ಹೊರವಲಯದ ಗಡಿದಂ ದೇವರಗುಡಿಪಲ್ಲಿ ಖಾಸಗಿ ಸಭಾಂಗಣದಲ್ಲಿ ಬಿಜೆಪಿ ಕಾರ್ಯಕರ್ತರ ಅವಲೋಕನ ಹಾಗೂ ಕಾರ್ಯಕರ್ತರು ಅಭಿನಂದನೆ ಸಭೆಯಲ್ಲಿ ಮಾತನಾಡಿ, ಚಿಕ್ಕಬಳ್ಳಾಪುರ ಜಿಲ್ಲೆಯ ಲೋಕಸಭೆ ಚುನಾವಣೆಯಲ್ಲಿ 8 ವಿಧಾನ ಸಭಾ ಕ್ಷೇತ್ರಗಳಲ್ಲಿ ಎಷ್ಟೆಷ್ಟು ಮತಗಳು ಪಡೆದಿರಬಹುದು ಎಂಬುದರ ಮಾಹಿತಿ ಪಡೆಯಲಾಗುತ್ತಿದೆ ಎಂದು ತಿಳಿಸಿದರು.

{ **ಪ್ರೀತಂಗೌಡ** } ಮಾಜಿ ಶಾಸಕ

ಜಿಲ್ಲೆಯಲ್ಲಿ ವಿಡಿಯೊ ವ್ಯಾಪಕವಾಗಿ ಹಂಚಿಕೆಯಾಗಿರುವುದು ನಿಜ. ಅಶ್ಲೀಲ ವಿಡಿಯೊಗಳನ್ನು ಹಂಚಿಕೊಳ್ಳಬಾರದು ಎಂದು ನಮ್ಮ ಕಾರ್ಯಕರ್ತರಿಗೆ ಕಟ್ಟುನಿಟ್ಟಾದ ಸೂಚನೆ ನೀಡಿದ್ದೇನೆ. ಈ ರೀತಿಯ ಕೃತ್ಯಗಳಿಗೆ ನಾನು ಬೆಂಬಲ ನೀಡುವುದಿಲ್ಲ. ಈ ಕುರಿತು ಹಾಸನ ಜಿಲ್ಲೆಯ ಪ್ರಮುಖ ನಾಯಕರು ನನ್ನ ಜತೆ ಮಾತನಾಡಿದ್ದಾರೆ. ಯಾರಿಗಾದರೂ ಪೆನ್‌ಡ್ರೈವ್ ಸಿಕ್ಕರೆ ಎಸ್‌ಐಟಿ ನಿಯಮಗಳನ್ನು ಪಾಲಿಸಬೇಕು.

ಪರಿಷತ್ ಚುನಾವಣೆ ಮೇಲೆ ಪೆನ್‌ಡ್ರೈವ್ ಪ್ರಕರಣ ಪರಿಣಾಮ ಬೀರಲ್ಲ: ಸಿಎಂ

ನಮ್ಮಲ್ಲಿ ಒಳಜಗಳವಿಲ್ಲ, ಸರಕಾರ ಸುಭದ್ರ

ಮೈಸೂರು: ನಮ್ಮ ಸರಕಾರ ಸುಭದ್ರವಾಗಿದೆ. ನಮ್ಮಲ್ಲಿ ಯಾವುದೇ ಒಳಜಗಳ, ಭಿನ್ನಮತ ಇಲ್ಲ, ಬಿಜೆಪಿಯವರು ರಾಜಕೀಯ ಉದ್ದೇಶಕ್ಕಾಗಿ ನಮ್ಮಲ್ಲಿ ಒಳಜಗಳ ಇದೆ ಎನ್ನುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರಕಾರ ಪತನ ಆಗುತ್ತೇ ಎಂದು ಒಂದು ವರ್ಷದಿಂದಲೂ ಹೇಳುತ್ತಿದ್ದಾರೆ. ಆದರೆ ನಮ್ಮಲ್ಲಿ ಯಾವುದೇ ರೀತಿಯ ಒಳ ಜಗಳವಾಗಲಿ, ಹೊರ ಜಗಳವಾಗಲಿ ಇಲ್ಲ. ಜಗಳ ಇದ್ದರೆ ಲೋಕಸಭಾ ಚುನಾವಣೆಯಲ್ಲಿ ಈ ರೀತಿ ಒಟ್ಟಾಗಿ ಕೆಲಸ ಮಾಡಲು ಸಾಧ್ಯವಾಗುತ್ತಿತ್ತಾ? ಎಂದು ಪ್ರಶ್ನೆ ಮಾಡಿದ ಅವರು ಮಹಾರಾಷ್ಟ್ರ ಸಿಎಂ ಮೊದಲು ತಮ್ಮ ಸರಕಾರವನ್ನು ಉಳಿಸಿಕೊಳ್ಳಲಿ ಎಂದು ಟಾಂಗ್ ನೀಡಿದರು.

ಸರಕಾರದ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡಿರುವ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರಿಗೆ ತಿರುಗೇಟು ನೀಡಿದ ಅವರು, ಕುಮಾರಸ್ವಾಮಿ ಅವರದ್ದು ಯಾವಾಗಲೂ ಇಟ್ ಅಂಡ್ ರನ್ ಕೇಸ್ ಆಗಿದ್ದು, ಅವರ ಬಗ್ಗೆ ನಾನು ಮಾತಾಡಲ್ಲ ಎಂದರು.

ಪೆನ್‌ಡ್ರೈವ್ ಪರಿಣಾಮ ಬೀರಲ್ಲ

ಈ ಚುನಾವಣೆ ಮೇಲೆ ಪೆನ್ ಡ್ರೈವ್ ಪ್ರಕರಣ ಯಾವುದೇ ಪರಿಣಾಮ ಬೀರುವುದಿಲ್ಲ. ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿಯಿಂದ ಕಾಂಗ್ರೆಸ್‌ಗೆ ಯಾವ ತೊಂದರೆಯೂ ಆಗಲ್ಲ. ಪೆನ್ ಡ್ರೈವ್‌ಗೂ ಇದಕ್ಕೂ ಯಾವುದೇ ಸಂಬಂಧ ಇಲ್ಲ. ಪದವೀಧರರು ಹಾಗೂ ಶಿಕ್ಷಕರು ರಾಜಕೀಯ ಪ್ರಭುದ್ಧರಿದ್ದಾರೆ. ಕೇಂದ್ರ ಸರಕಾರ ಏನ್ ಮಾಡಿದೆ. ರಾಜ್ಯ ಸರಕಾರ ಏನ್ ಮಾಡಿದೆ ಎಂಬುದನ್ನು ಗಮನಿಸಿ ಮತದಾನ ಮಾಡುತ್ತಾರೆ ಎಂದರು.

ಸಚಿವರಾದ ಡಾ.ಎಚ್.ಸಿ. ಮಹದೇವಪ್ಪ, ಮಧು ಬಂಗಾರಪ್ಪ,ಆ ಕೆ.ವೆಂಕಟೇಶ್, ಎನ್.ಚಲುವರಾಯಸ್ವಾಮಿ, ಶಾಸಕರಾದ ಡಿ.ರವಿಶಂಕರ್, ಕೆ.ಎಂ. ಶಿವಲಿಂಗೇಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಪಕ್ಷದ ಗ್ರಾಮಾಂತರ ಜಿಲ್ಲಾ ಸಮಿತಿಯ ಅಧ್ಯಕ್ಷ ಬಿ.ಜೆ. ವಿಜಯ್‌ಕುಮಾರ್ ಪಾಲ್ಗೊಂಡಿದ್ದರು.

ಸುದ್ದಿಗಾರರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಉತ್ತಮ ವಾತಾವರಣ ಇದೆ

ರಾಜ್ಯ ಸರಕಾರ ಪರಿಷತ್ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯದಲ್ಲಿ ಉತ್ತಮ ವಾತಾವರಣ ಇದೆ. ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಆರು ತಿಂಗಳ ಮೊದಲೇ ಅಭ್ಯರ್ಥಿಗಳನ್ನು ಘೋಷಣೆ ಮಾಡಲಾಗಿತ್ತು. ಇದರಿಂದ ಅಭ್ಯರ್ಥಿಗಳು ಚುನಾವಣೆಗೆ ತಯಾರಿ ಮಾಡಿಕೊಳ್ಳಲು ಟೈಮ್ ಸಿಕ್ಕಿತು. ಇದರಿಂದ ಮತದಾರರನ್ನು ಭೇಟಿ ಮಾಡಲು ಅನುಕೂಲವಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಪ್ರಚಾರಕ್ಕೆ ಹೋಗಲು ಇಷ್ಟವಿಲ್ಲ ಹೊರ ರಾಜ್ಯಗಳ ಲೋಕಸಭಾ ಚುನಾವಣಾ ಪ್ರಚಾರಕ್ಕೆ ನನ್ನನ್ನು ಸ್ಟಾರ್ ಪ್ರಚಾರಕನನ್ನಾಗಿ ಮಾಡಿದ್ದಾರೆ. ಆದರೆ ಸಾಮಾನ್ಯವಾಗಿ ನಾನು ಹೊರ ರಾಜ್ಯಗಳಿಗೆ ಹೋಗಲ್ಲ. ಹೈಕಮಾಂಡ್‌ನವರು ಕರೆದಿದ್ದು, ಇಲ್ಲೇ ಬೇಕಾದಷ್ಟು ಕೆಲಸ ಇದೆ. ಪ್ರಚಾರಕ್ಕೆ ಹೋಗಲು ವೈಯಕ್ತಿಕವಾಗಿ ಇಷ್ಟ ಇಲ್ಲ.

ಸಿದ್ದರಾಮಯ್ಯ, ಮುಖ್ಯಮಂತ್ರಿ

- ಬಿಜೆಪಿ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ
- ಮಹಾರಾಷ್ಟ್ರ ಸಿಎಂ ಮೊದಲು ತಮ್ಮ ಸರಕಾರವನ್ನು ಉಳಿಸಿಕೊಳ್ಳಲಿ
- ಮೈತ್ರಿಯಿಂದ ಕಾಂಗ್ರೆಸ್‌ಗೆ ಯಾವ ತೊಂದರೆಯೂ ಆಗಲ್ಲ

ಏಕನಾಥ್ ಸಿಂಧೆ ಹೇಳಿಕೆಗೆ ಸಿಎಂ ತಿರುಗೇಟು

ಬಿಜೆಪಿ ನಾಯಕರಿಗೆ ಸರಕಾರದ ಚಿಂತೆ ಬೇಡ

ಬೆಂಗಳೂರು: ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಸಿಂಧೆ ಅವರ ಹೇಳಿಕೆಯ ಬೆನ್ನಲ್ಲೇ ಭಾರಿ ಚರ್ಚೆಗೆ ಗ್ರಾಸವಾಗಿರುವ ಆಪರೇಷನ್ ಕಮಲದ ಚರ್ಚೆಗೆ ‘ಬಿಜೆಪಿ ನಾಯಕರಿಗೆ ನಮ್ಮ ಸರಕಾರದ ಬಗ್ಗೆ ಚಿಂತೆ ಬೇಡ ಎನ್ನುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ಬಿಜೆಪಿ ನಾಯಕರೇ, ನಮ್ಮ ಸರಕಾರದ ಚಿಂತೆ ಮಾಡುವುದು ಬಿಡಿ. ಅದು ಸುಭದ್ರವಾಗಿ ಐದು ವರ್ಷ ಪೂರ್ಣಗೊಳಿಸಲಿದೆ. ನಿಮ್ಮ ಪಕ್ಷದ ಬಗ್ಗೆ ಯೋಚನೆ ಮಾಡಿ. ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ವಂಚಿತ ಅತೃಪ್ತ ನಾಯಕರೆಲ್ಲ ತಮಗೆ ಆಗಿರುವ ಅನ್ಯಾಯದ ವಿರುದ್ಧ ಸೇಡಿಗಾಗಿ ತಹತಹಿಸುತ್ತಿದ್ದಾರೆ. ಚುನಾವಣಾ ಫಲಿತಾಂಶ ಹೊರಬಿದ್ದ ಕೂಡಲೇ ಈ ಸೇಡಿನ ಜ್ವಾಲೆ ಧಗಧಗಿಸಿದರೆ ಆಶ್ಚರ್ಯವಿಲ್ಲ ಎಂದು ಎಚ್ಚರಿಸಿದ್ದಾರೆ.

ರಾಜ್ಯ ಬಿಜೆಪಿಯ ಮುಕ್ಕಾಲು ಪಾಲು ನಾಯಕರು ಬಿಜೆಪಿಯ ಈಗಿನ ಅಧ್ಯಕ್ಷ ಬಿ. ವೈ.ವಿಜಯೇಂದ್ರ ಅವರ ತಲೆದಂಡಕ್ಕಾಗಿ ವ್ಯೂಹ ರಚನೆಯಲ್ಲಿ ತೊಡಗಿದ್ದಾರೆ. ಚುನಾವಣೆಯಲ್ಲಿನ ಹಿನ್ನಡೆಯನ್ನು ತಂದೆ–ಮಕ್ಕಳ ತಲೆಗೆ ಕಟ್ಟಿ ಅವರನ್ನು ಮೂಲೆಗೆ ತಳ್ಳುವ ಕಸರತ್ತಿನ ತಯಾರಿ ಭರದಿಂದ ನಡೆಯುತ್ತಿದೆ. ಇದಕ್ಕೆ ಆರ್‌ಎಸ್ ಎಸ್‌ನ ಒಂದು ಬಣದ ಆಶೀರ್ವಾದವಿದೆ. ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ವಂಚಿತರಾಗಿದ್ದ ನಾಯಕರು ಚುನಾವಣಾ ಪ್ರಚಾರದಲ್ಲಿ ಸಕ್ರಿಯವಾಗಿ ಭಾಗವಹಿಸಿಲ್ಲ. ಈ ಚುನಾವಣೆಯಲ್ಲಿ ಯಡಿಯೂರಪ್ಪ ಮತ್ತು ಮಕ್ಕಳು ಪಕ್ಷವನ್ನು ಗೆಲುವಿನ ಹಾದಿಯಲ್ಲಿ ಮುನ್ನಡೆಸದಿದ್ದರೆ ತಾವೆಲ್ಲ ಶಾಶ್ವತವಾಗಿ ಮೂಲೆ ಸೇರುವುದು ಖಚಿತ ಎನ್ನುವ ಆತಂಕದಲ್ಲಿದ್ದಾರೆ. ಇದರಿಂದಾಗಿ ಲೋಕಸಭಾ ಚುನಾವಣೆಯ ನಂತರ ರಾಜ್ಯ ಬಿಜೆಪಿಯಲ್ಲಿ ಭಿನ್ನಮತದ ಮಹಾಸ್ಫೋಟ ಆಗಲಿದೆ ಎಂದು ವ್ಯಂಗ್ಯವಾಡಿದ್ದಾರೆ.

ಮಹಾರಾಷ್ಟ್ರದಲ್ಲಿ ಮೂಲೆ ಸೇರುವುದು ಖಚಿತ

ಚುನಾವಣಾ ಫಲಿತಾಂಶದ ನಂತರ ರಾಜ್ಯದ ಕಾಂಗ್ರೆಸ್ ಪತನಗೊಳ್ಳಲಿದೆ ಎಂದು ಭವಿಷ್ಯ ನುಡಿದಿರುವ ಮಹಾರಾಷ್ಟ್ರದ ಮುಖ್ಯಮಂತ್ರಿ ಏಕನಾಥ ಶಿಂಧೆ ಅವರು ಮೊದಲು ತಮ್ಮ ಭವಿಷ್ಯದ ಬಗ್ಗೆ ಯೋಚನೆ ಮಾಡುವುದು ಒಳ್ಳೆಯದು. ಈ ಪಕ್ಷದ್ರೋಹಿ ಶಿಂಧೆ ಅವರ ಪಕ್ಷ ಈ ಚುನಾವಣೆಯಲ್ಲಿ ಧೂಳೀಪಟವಾಗುವುದರೊಂದಿಗೆ, ಮಹಾರಾಷ್ಟ್ರದ ರಾಜಕೀಯದಲ್ಲಿ ಅವರು ಮೂಲೆ ಸೇರುವುದು ಖಚಿತ. ಈ ಹತಾಶೆಯಿಂದ ಏನೋ ಬಡಬಡಿಸಿದ್ದಾರೆ. ಅವರ ಮಾತನ್ನು ಗಂಭೀರವಾಗಿ ಸ್ವೀಕರಿಸುವ ಅಗತ್ಯ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಹುಬ್ಬಳ್ಳಿ, ದಾವಣಗೆರೆ, ಚಿಕ್ಕಮಗಳೂರಿನ ಹಲವೆಡೆ ಭಾರಿ ಮಳೆ

ಮುಂದುವರೆದ ವರುಣನ ಅಬ್ಬರ

ಬೆಂಗಳೂರು: ರಾಜ್ಯಾದ್ಯಂತ ಮಳೆಯಾರ್ಭಟ ಜೋರಾಗಿದೆ. ಗುಡುಗು – ಸಿಡಿಲಿನಿಂದ ಕೂಡಿದ ಮಳೆಯಾಗುತ್ತಿದೆ. ಕುಂದಾಪುರ ತಾಲೂಕಿನ ಸಿದ್ದಾಪುರ ಗ್ರಾಮದಲ್ಲಿ ಸಿಡಿಲು ಬಡಿದು ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ. ಇನ್ನು ಮೇ 18ರ ವರೆಗೆ ರಾಜ್ಯದ ಹಲವೆಡೆ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

ಸಿದ್ದಾಪುರ ಗ್ರಾಮದ ಸುರೇಶ್ ಶೆಟ್ಟಿ (38) ಮೃತ ದುರ್ದೈವಿ. ಮಂಗಳವಾರ ಸಂಜೆ ಹೊತ್ತಿಗೆ ಜಿಲ್ಲೆಯಾದ್ಯಂತ ಭಾರಿ ಮಳೆ ಸುರಿದಿದೆ. ಈ ವೇಳೆ ಸುರೇಶ್ ಶೆಟ್ಟಿ ಅವರಿಗೆ ಸಿಡಿಲು ಬಡಿದಿದ್ದು, ತೀವ್ರವಾಗಿ ಅಸ್ವಸ್ಥಗೊಂಡು ಮೃತಪಟ್ಟಿದ್ದಾರೆ.

ಉತ್ತರ ಕನ್ನಡದಲ್ಲೂ ವರುಣಾರ್ಭಟ: ಉತ್ತರ ಕನ್ನಡದ ಘಟ್ಟದ ಮೇಲಿನ ತಾಲೂಕುಗಳಲ್ಲೂ ವರುಣಾರ್ಭಟ ಜೋರಾಗಿದೆ. ಶಿರಸಿ, ಸಿದ್ದಾಪುರ ಭಾಗದಲ್ಲೂ ಭಾರಿ ಗಾಳಿ ಸಹಿತ ಮಳೆಯಾಗಿದೆ. ಶಿರಸಿಯಲ್ಲಿ ಭಾರಿ ಮಳೆಗೆ ಮರಗಳು ಧರೆಗುರುಳಿವೆ. ನಗರದ ಸಹ್ಯಾದ್ರಿ ಕಾಲೋನಿಯಲ್ಲಿ ಮರ ಬಿದ್ದು, ವಿದ್ಯುತ್ ಕಂಬ ಮುರಿದು ರಸ್ತೆ ಸಂಪೂರ್ಣ ಬ್ಲಾಕ್ ಆಗಿದೆ. ಹತ್ತಕ್ಕೂ ಅಧಿಕ ವಿದ್ಯುತ್ ಕಂಬಗಳಿಗೆ ಹಾನಿಯಾಗಿದೆ ಎಂದು ತಿಳಿದು ಬಂದಿದೆ.

ಕುಮಟಾ ತಾಲೂಕಿನ ವಿವಿಧೆಡೆ ಗುಡುಗು ಸಹಿತ ಧಾರಾಕಾರ ಮಳೆಯಾಗುತ್ತಿದೆ. ಬಿಸಿಲಿಗೆ ಕಾದಿದ್ದ ಇಳೆಗೆ ವರುಣ ತಂಪೆರೆದಿದ್ದಾನೆ. ಅರ್ಧ ಗಂಟೆಗೂ ಅಧಿಕ ಕಾಲ ಧಾರಾಕಾರ ಮಳೆಯಾಗಿದೆ. ಘಟ್ಟದ ಮೇಲಿನ ತಾಲೂಕುಗಳಲ್ಲಿ ಮಳೆಯಾದರೂ ಕರಾವಳಿಗೆ ವರುಣ ಕಾಲಿಟ್ಟಿರಲಿಲ್ಲ. ಇದೀಗ ವರುಣಾಗಮನದಿಂದ ಕರಾವಳಿ ಜನತೆ ಖುಷಿಯಾಗಿದ್ದಾರೆ. ಭಟ್ಕಳ, ಹೊನ್ನಾವರ, ಅಂಕೋಲಾ, ಕಾರವಾರ ಭಾಗದಲ್ಲಿ ಮೋಡ ಕವಿದ ವಾತಾವರಣವಿದೆ.

ಧಾರವಾಡದಲ್ಲಿ ಮಳೆಯ ಅಬ್ಬರ:

ಧಾರವಾಡದಲ್ಲಿ ಮಂಗಳವಾರ ಬೆಳಗ್ಗೆಯಿಂದಲ್ಲೂ ಮೋಡ ಕವಿದ ವಾತಾವರಣವಿತ್ತು. ಇಳಿ ಸಂಜೆಯಾಗುತ್ತಿದ್ದಂತೆ ಧಾರವಾಡ ನಗರಕ್ಕೆ ವರುಣನ ಆಗಮನವಾಗಿದೆ. ಕಳೆದ ಎರಡು ದಿನಗಳ ಹಿಂದೆ ಸುರಿದಿದ್ದ ಮಳೆಯು ಸ್ವಲ್ಪ ಸಮಯ ಬ್ರೇಕ್ ಕೊಟ್ಟಿತ್ತು. ಇಂದು ಮತ್ತೆ ಮಳೆ ಸುರಿದಿದ್ದು, ವಾಹನ ಸಂಚಾರ ಅಸ್ತವ್ಯಸ್ತವಾಗಿತ್ತು.

ಮೇ 18ರ ವರೆಗೆ ಮಳೆ ಸಾಧ್ಯತೆ: ಮೇ 18ರ ವರೆಗೆ ಬೆಂಗಳೂರು ಸೇರಿದಂತೆ ಹಲವೆಡೆ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ತಜ್ಞರು ನೀಡಿದ್ದಾರೆ. ರಾಜಧಾನಿ ಬೆಂಗಳೂರಿನಲ್ಲಿ ಗುಡುಗು, ಮಿಂಚು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡಿನ ಕೆಲವು ಕಡೆ ಹಾಗೂ ದಕ್ಷಿಣ ಒಳನಾಡಿನ ಬಹುತೇಕ ಕಡೆ ಮಳೆಯಾಗಲಿದೆ. ಕೊಡಗು, ಮೈಸೂರು, ಮಂಡ್ಯದ ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಗಾಳಿ (40–50 ಕಿಮೀ)ಯೊಂದಿಗೆ ಭಾರಿ ಮಳೆಯಾಗುವ ಸಾಧ್ಯತೆ ಇದೆ.

ಮಲೆನಾಡಿಗರಲ್ಲಿ ಮಂದಹಾಸ ಮೂಡಿಸಿದ ಮಳೆರಾಯ

ಚಿಕ್ಕಮಗಳೂರು: ಮಲೆನಾಡಿಗೆ ವರುಣ ಕೃಪೆ ತೋರಿದ್ದಾನೆ. ಕಳೆದೊಂದು ವಾರದಿಂದ ಜಿಲ್ಲೆಯಲ್ಲಿ ಬಿಟ್ಟು ಬಿಟ್ಟು ಮಳೆಯಾಗುತ್ತಿದ್ದು, ಜನರಲ್ಲಿ ಮಂದಹಾಸ ಮೂಡಿಸಿದೆ. ಮಂಗಳವಾರ ಜಿಲ್ಲೆಯ ಶೃಂಗೇರಿ ತಾಲೂಕಿನ ಸುತ್ತಮುತ್ತ ಮಳೆಯಾಗಿದೆ. ಬೆಳಗ್ಗೆಯಿಂದ ಬಿಸಿಲ ಝಳ ಹೆಚ್ಚಾಗಿದ್ದು ಮಧ್ಯಾಹ್ನದ ವೇಳೆಗೆ ಗುಡುಗು ಸಹಿತ ಒಂದು ಗಂಟೆಗೂ ಹೆಚ್ಚು ಕಾಲ ಮಳೆಯಾಗಿದೆ. ಮಳೆಯಿಂದ ಪ್ರವಾಸಿಗರ ವಾಹನ ಸಂಚಾರ ಅಸ್ತವ್ಯಸ್ತವಾಗಿತ್ತು. ಇನ್ನೂ ತುಂಗಾ ನದಿಯ ಹರಿವು ಸ್ವಲ್ಪ ಮಟ್ಟಿಗೆ ಹೆಚ್ಚಾಗಿದೆ. ಶೃಂಗೇರಿ ಭಾಗದಲ್ಲಿ ಮಳೆಯಾಗಿದ್ದು ಈ ಭಾಗದ ಅಡಕೆ, ಕಾಫಿ ಬೆಳೆಗಾರರ ಮೊಗದಲ್ಲಿ ಮಂದಹಾಸ ಮೂಡಿಸಿದೆ. ಮಳೆಯಿಂದ ಶೃಂಗೇರಿ ಸುತ್ತಮುತ್ತ ಪ್ರವಾಸಿ ತಾಣಕ್ಕೆ ಆಗಮಿಸಿದ ಪ್ರವಾಸಿಗರಿಗೆ ಇಲ್ಲಿನ ಪ್ರಕೃತಿ ಸೌಂದರ್ಯ ಸವಿಯಲು ಅಡ್ಡಿಯಾಗಿತ್ತು. ಜಿಲ್ಲೆಯ ಪಶ್ಚಿಮಘಟ್ಟ ಪ್ರದೇಶದಲ್ಲಿ ಕಳೆದ ಒಂದು ವಾರದಿಂದ ಮಳೆಯಾಗುತ್ತಿದ್ದು ಹರಿವು ನಿಲ್ಲಿಸಿದ್ದ ತುಂಗಾ ನದಿಯಲ್ಲಿ ನೀರಿನ ಹರಿವು ಕೊಂಚ ಮಟ್ಟಿಗೆ ಏರಿಕೆ ಕಂಡಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷಾ ಲೋಪದೋಷವಿದೆ: ಅರುಣ್

ಫಲಿತಾಂಶ ಕುಸಿತ; ತನಿಖೆಗೆ ಆಗ್ರಹ

ಬೆಂಗಳೂರು: ಇತ್ತೀಚೆಗೆ ಪ್ರಕಟವಾಗಿರುವ ಎಸ್‌ಎಸ್ ಎಲ್‌ಸಿ ಪರೀಕ್ಷಾ ಫಲಿತಾಂಶಕ್ಕೆ ಸಾರ್ವಜನಿಕ ವಲಯದಲ್ಲಿ ಭಾರಿ ವಿರೋಧ ವ್ಯಕ್ತವಾಗುತ್ತಿದೆ. ಹಲವು ಲೋಪದೋಷಗಳಿರುವ ಆರೋಪ ಕೇಳಿಬಂದಿದೆ. ಆದ್ದರಿಂದ ಈ ಸಂಬಂಧ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಮಲ್ಲೇಶ್ವರದ ಜಗನ್ನಾಥ ಭವನದಲ್ಲಿ ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಶಹಾಪುರ ಮಾತನಾಡಿ, ಸ್ವಾತಂತ್ರ್ಯ ಬಂದ ನಂತರಯಿಷ್ಟು ಕೆಟ್ಟ ಪರೀಕ್ಷೆ ನಡೆದಿರಲಿಲ್ಲ, ಕಾಂಗ್ರೆಸ್ ಸರಕಾರ ಶಿಕ್ಷಣ ವ್ಯವಸ್ಥೆಯನ್ನು ಅಧಃಪತನಕ್ಕೆ ಕೊಂಡೊಯ್ಯುತ್ತಿದ್ದಾರೆ. ಈ ಸಲದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆದ ರೀತಿ, ಕೈಗೊಂಡ ಕ್ರಮದ ಬಗ್ಗೆ, ಆಗಿರುವ ಲೋಪಗಳ ಬಗ್ಗೆ ಒಂದು ಗಂಭೀರ ತನಿಖೆ ನಡೆಯಬೇಕಿದೆ. ಈ ವಿಚಾರದಲ್ಲಿ ಸರಕಾರ ತಕ್ಷಣ ಉನ್ನತ ಮಟ್ಟದ ತನಿಖೆಗೆ ಆದೇಶ ಮಾಡಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಅವಧಿಯಲ್ಲಿ ಕಳೆದ ಒಂದು ವರ್ಷದಿಂದ ಶೈಕ್ಷಣಿಕ ವ್ಯವಸ್ಥೆಯಲ್ಲಿ ಅದ್ವಾನವಾಗಿದೆ. ಶಾಲಾ ಶಿಕ್ಷಣ ಇಲಾಖೆಯನ್ನು ನಿರ್ವಹಿಸುವಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ವಿಫಲವಾಗಿದ್ದಾರೆ. ಲಕ್ಷಾಂತರ ಮಕ್ಕಳು ಆತಂಕದಲ್ಲಿದ್ದಾರೆ, ಕೆಎಸ್‌ಇಎಬಿ ಮೂಲಕ ಈ ವರ್ಷ ಎಸ್ ಎಸ್‌ಎಲ್‌ಸಿ ಪರೀಕ್ಷೆ ನಡೆಸಿರುವುದಾಗಿ ಹೇಳಿದ್ದಾರೆ. ಸ್ವಾತಂತ್ರ್ಯ ಬಂದ ನಂತರ ಈ ವರ್ಷ ಅತ್ಯಂತ ಕೆಟ್ಟ ಪರೀಕ್ಷೆ ನಡೆದಿದೆ ಎಂದು ಆರೋಪಿಸಿದರು.

ಪಠ್ಯ ಪುಸ್ತಕಗಳಲ್ಲಿರುವ ಪಾಠಗಳನ್ನು ಕಿತ್ತು ಹಾಕುವುದರೊಂದಿಗೆ ಇವರ ಸರಕಾರ ಶುರುವಾಯಿತು. ಪಠ್ಯ ತೆಗೆಯುವ ವಿಚಾರ ಕ್ಯಾಬಿನೆಟ್ ಸಭೆಗೂ ತಗೊಂಡು ಹೋದರು. 20 ಪಾಠಗಳನ್ನು ತೆಗೆದು ಹಾಕಿದರು, ಶಿಕ್ಷಣ ಸಚಿವರು ಸ್ವತಂತ್ರ ಅಧಿಕಾರವಿಲ್ಲದೇ ಕೈಗೊಂಬೆ ಆಗಿದ್ದರು. ಕಾಂಗ್ರೆಸ್ ಸರಕಾರವನ್ನು ನಡೆಸುತ್ತಿರೋದು ಆ ಪಕ್ಷದ ಚಾಣಕ್ಯರು, ಪಠ್ಯ ಪರಿಷ್ಕರಣೆ ಯಾವುದೇ ಶಾಲೆಯ ಮಕ್ಕಳವರೆಗೂ ತಲುಪಲೇ ಇಲ್ಲ. ಹೊಸ ಪಠ್ಯದ ಜೆರಾಕ್ಸ್ ಸಹ ಶಾಲೆ ಮಕ್ಕಳಿಗೆ ಕೊಡಲಿಲ್ಲ ಎಂದು ಟೀಕಿಸಿದರು.



ಈ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆದ ರೀತಿ, ಕೈಗೊಂಡ ಕ್ರಮದ ಬಗ್ಗೆ ಹಾಗೂ ಆಗಿರುವ ಲೋಪಗಳ ಬಗ್ಗೆ ಒಂದು ಗಂಭೀರ ತನಿಖೆ ನಡೆಯಬೇಕಿದೆ. ಈ ವಿಚಾರದಲ್ಲಿ ಸರಕಾರ ತಕ್ಷಣ ಉನ್ನತ ಮಟ್ಟದ ತನಿಖೆಗೆ ಆದೇಶ ಮಾಡಬೇಕು. ಪರೀಕ್ಷಾ ವ್ಯವಸ್ಥೆಯಲ್ಲಿ ಆಗಿರುವ ಲೋಪಗಳನ್ನು ಸರಿಪಡಿಸಬೇಕು.

–ಅರುಣ್ ಶಹಾಪುರ, ವಿಧಾನಪರಿಷತ್ ಮಾಜಿ ಸದಸ್ಯ

ವೆಬ್ ಕಾಸ್ಟಿಂಗ್ ಗೊಂದಲ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಯಿತು. ಪ್ರತಿಯೊಂದು ಪರೀಕ್ಷಾ ಕೇಂದ್ರದಲ್ಲೂ ವೆಬ್ ಕಾಸ್ಟಿಂಗ್ ಇತ್ತು. ಪರೀಕ್ಷಾ ಮೇಲ್ವಿಚಾರಕರು ಗೊಂದಲಕ್ಕೊಳಗಾದರು. ವೆಬ್ ಕಾಸ್ಟಿಂಗ್ ಬಗ್ಗೆ ಯಾರಿಗೂ ತರಬೇತಿಯೂ ಇರಲಿಲ್ಲ. ಶಿಕ್ಷಕರ ಮೇಲೆ ಒತ್ತಡ ಹಾಕಿ ದಮನಕಾರಿ ರೂಪದಲ್ಲಿ ವೆಬ್ ಕಾಸ್ಟಿಂಗ್ ಮಾಡಿದರು. ಇದರಿಂದ ಮಕ್ಕಳಿಗೂ ಭಯದ ವಾತಾವರಣ ಸೃಷ್ಟಿಯಾಯಿತು ಎಂದು ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಶಹಾಪುರ ಆರೋಪಿಸಿದರು.

ಜೈಲಿಂದ ರೇವಣ್ಣ ರಿಲೀಸ್

← ಮೊದಲಪುಟದಿಂದ

ಈ ವೇಳೆ ರೇವಣ್ಣ ಅವರನ್ನು ನೋಡಿ ರೇವಣ್ಣ ಪರ ಕಾರ್ಯಕರ್ತರು, ಅಭಿಮಾನಿಗಳು ಜೈಕಾರ ಕೂಗಿದರು. ಕೆಲವರು ಪಟಾಕಿ ಹೊಡೆದು ಸಂಭ್ರಮಿಸಿದರು. ಕಾರ್ಯಕರ್ತರ ಈ ಸಂಭ್ರಮವನ್ನು ನೋಡಿ, ರೇವಣ್ಣ ಭಾವುಕರಾದರು. ಕಾರಿನಲ್ಲಿ ದೇವೇಗೌಡರ ನಿವಾಸದತ್ತ ತೆರಳಿದ ರೇವಣ್ಣ, ಕಾರ್ಯಕರ್ತರತ್ತ ಕೈಮುಗಿದರು.

ದೇವೇಗೌಡರ ಮನೆಯಲ್ಲಿ ಚರ್ಚೆ: ಪರಪ್ಪನ ಅಗ್ರಹಾರದಿಂದ ನೇರವಾಗಿ ಪದ್ಮನಾಭನಗರದಲ್ಲಿರುವ ದೇವೇಗೌಡರ ನಿವಾಸಕ್ಕೆ ತೆರಳಿದ ರೇವಣ್ಣ, ದೇವೇಗೌಡರೊಂದಿಗೆ ಚರ್ಚೆ ನಡೆಸಿದರು. ಜೈಲಿನಲ್ಲಿ ಆರು ದಿನ ಕಳೆದ ಕಹಿ ಅನುಭವ, ಮುಂದಿನ ಕಾನೂನು ಹೋರಾಟ, ರಾಜಕೀಯವಾಗಿ ಆಗಿರುವ ಡ್ಯಾಮೇಜ್ ಕಂಟ್ರೋಲ್ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಚರ್ಚೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ದೇವೇಗೌಡರ ನಿವಾಸದಲ್ಲಿ ಕುಟುಂಬಸ್ಥರ ಜೊತೆ ಮಾತನಾಡಿದ ಬಳಿಕ ತಮ್ಮ ಟೆಂಪಲ್ ರನ್ ಶುರು ಮಾಡಿದ್ದಾರೆ. ಮೊದಲಿಗೆ ರೇವಣ್ಣ, ದೇವೇಗೌಡರ ನಿವಾಸದಿಂದ ನೇರವಾಗಿ ಬಸವನಗುಡಿಯ ಕಾರಂಜಿ ಆಂಜನೇಯ ಸ್ವಾಮಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಪ್ರಜ್ವಲ್ ರೇವಣ್ಣ ಇಂದು ಆಗಮನ?

← ಮೊದಲಪುಟದಿಂದ

ವಿಚಾರಣೆಗೆ ಹಾಜರಾಗುವಂತೆ ಪ್ರಜ್ವಲ್ ಲುಕ್ ಔಟ್ ನೋಟಿಸ್ ಹಾಗೂ ಬ್ಲೂ ಕಾರ್ನರ್ ನೋಟಿಸ್ ಜಾರಿ ಮಾಡಲಾಗಿತ್ತು. ತಂದೆಗೆ ಜಾಮೀನು ಸಿಕ್ಕ ಹಿನ್ನೆಲೆಯಲ್ಲಿ ವಿದೇಶದಲ್ಲಿರುವ ಪ್ರಜ್ವಲ್ ರೇವಣ್ಣ ನ್ಯಾಯಾಲಯದ ಮುಂದೆ ಶರಣಾಗುವ ಸಾಧ್ಯತೆಯಿದೆ. ಇದೀಗ ಅವರು ಬುಧವಾರ ದೇಶಕ್ಕೆ ಆಗಮಿಸುವ ಮಾಹಿತಿ ಲಭ್ಯವಾಗಿದೆ. ಎಸ್‌ಐಟಿ ಮುಂದೆ ಬುಧವಾರ ಭವಾನಿ ರೇವಣ್ಣ ವಿಚಾರಣೆಗೆ ಹಾಜರಾಗುವ ಸಾಧ್ಯತೆ ಇದ್ದು, ಪ್ರಜ್ವಲ್ ರೇವಣ್ಣ ಬುಧವಾರ ಸಂಜೆ ಬೆಂಗಳೂರಿಗೆ ಬಂದು ಗುರುವಾರ ನ್ಯಾಯಾಲಯದ ಮುಂದೆ ಹಾಜರಾಗುವ ಸಾಧ್ಯತೆಯಿದೆ. ರೇವಣ್ಣಗೆ ಜಾಮೀನು ಸಿಕ್ಕ ಬಳಿಕ ನ್ಯಾಯಲಯದ ಮುಂದೆ ಹಾಜರಾಗುವಂತೆ ರೇವಣ್ಣ ಕುಟುಂಬದ ವಕೀಲರು ಸಲಹೆ ನೀಡಿದ್ದರಿಂದ ಪ್ರಜ್ವಲ್ ರೇವಣ್ಣ ವಿದೇಶದಿಂದ ಬರುತ್ತಿದ್ದಾರೆ ಎಂಬ ಮಾಹಿತಿ ತಿಳಿದುಬಂದಿದೆ.

ತಿರುಗುಬಾಣವಾಗದಂತೆ ರಾಜ್ಯ ಸರಕಾರ ಎಚ್ಚರ

← ಮೊದಲಪುಟದಿಂದ

ಪ್ರಮುಖವಾಗಿ ರೇವಣ್ಣ ಅವರಿಗೆ ಜಾಮೀನು ಸಿಕ್ಕಿದ್ದರೆ ಮತ್ತೊಂದೆಡೆ ಸಂತ್ರಸ್ತೆ ತನಗೆ ಯಾವುದೇ ಕಿರುಕುಳ ನೀಡಿಲ್ಲ ಎನ್ನುವ ಹೇಳಿಕೆಯನ್ನು ನೀಡಿದ್ದಾರೆ. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು, ಇದೇ ವಿಷಯವನ್ನು ಮುಂದಿಟ್ಟುಕೊಂಡು ಸರಕಾರದ ವಿರುದ್ಧ ಆರೋಪ ಮಾಡುವುದು ನಿಶ್ಚಿತ. ಆದ್ದರಿಂದ ಪ್ರಕರಣವನ್ನು ಆದಷ್ಟು ಶೀಘ್ರ ಮುಗಿಸಬೇಕು. ಜತೆಗೆ ಪ್ರಜ್ವಲ್ ರೇವಣ್ಣರನ್ನು ವಾಪಸು ಕರೆಸಿಕೊಂಡು ಬರಲು ಏನೆಲ್ಲ ಮಾಡಬೇಕೋ ಅದೆಲ್ಲ ಪ್ರಯತ್ನವನ್ನು ಎಸ್‌ಐಟಿ ಮಾಡಲಿ ಎಂದು ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪ್ರಜ್ವಲ್ ಶೋಧಕ್ಕೆ ಇನ್ನಷ್ಟು ಶ್ರಮ: ಪೆನ್‌ಡ್ರೈವ್ ಪ್ರಕರಣದ ಪ್ರಮುಖ ಆರೋಪ ಪ್ರಜ್ವಲ್ ರೇವಣ್ಣ ಅವರನ್ನು ಬಂಧಿಸಿದೇ ಬೇರೆಯವರನ್ನು ವಿಚಾರಣೆ ನಡೆಸುತ್ತಿರುವ ಎಸ್‌ಐಟಿ ಕ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ಅಸಮಾಧಾನ ಹೆಚ್ಚಾಗುತ್ತಿದೆ. ಆದ್ದರಿಂದ ಪ್ರಜ್ವಲ್ ರೇವಣ್ಣ ಅವರು ಎಲ್ಲಿದ್ದಾರೆ ಎನ್ನುವುದನ್ನು ಶೀಘ್ರವೇ ಪತ್ತೆಹಚ್ಚಬೇಕು. ಇಲ್ಲದಿದ್ದರೆ ಸಾರ್ವಜನಿಕ ವಲಯದಲ್ಲಿ ಕೆಟ್ಟ ಸಂದೇಶ ರವಾನೆಯಾಗಲಿದೆ. ಇದರೊಂದಿಗೆ ವಿದೇಶದಲ್ಲಿರುವ ಪ್ರಜ್ವಲ್ ರೇವಣ್ಣ ಬಂಧಿಸುವುದು, ವಾಪಸು ಕರೆತರುವುದು ಕೇಂದ್ರ ಸರಕಾರದ ಹೊಣೆ ಎನ್ನುವ ವಿಷಯವನ್ನು ಸಾರ್ವಜನಿಕರಿಗೆ ಮುಟ್ಟಿಸಬೇಕು ಎನ್ನುವ ಸೂಚನೆಯನ್ನು ಸಿಎಂ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರೈಲಿಗೆ ಸಿಲುಕಿ 46 ಕುರಿಗಳು ಸಾವು

ನೆಲಮಂಗಲ: ರೈಲು ಹರಿದ ಪರಿಣಾಮ 46 ಕುರಿಗಳು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನೆಲಮಂಗಲ ತಾಲೂಕಿನ ನಿಡವಂದ ಗ್ರಾಮದ ರೈಲ್ವೆ ನಿಲ್ದಾಣದ ಬಳಿ ನಡೆದಿದೆ. ರೈತ ರಂಗನಾಥ್ ಎಂಬುವರಿಗೆ ಸೇರಿದ ಕುರಿಗಳಾಗಿದ್ದು, ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿದೆ.

ಇದೇ ವೇಳೆ, ರೈಲ್ವೆ ಸಿಬ್ಬಂದಿಯೊಬ್ಬರು ಸತ್ತ ಕೆಲ ಕುರಿಗಳನ್ನು ತಮಗೆ ನೀಡಬೇಕು ಎಂದು ಕೇಳಿದ್ದರಿಂದ ಗ್ರಾಮಸ್ಥರು ಅವರನ್ನು ತರಾಟೆಗೆ ತೆಗೆದುಕೊಂಡ ಘಟನೆಯೂ ನಡೆದಿದೆ. ಈ ಕುರಿತು ರೈಲ್ವೆ ಸಿಬ್ಬಂದಿ ಪ್ರತಿಕ್ರಿಯಿಸಿ, ನಾನು ತಿನ್ನುವ ಸಲುವಾಗಿ ಒಂದೆರಡು ಕುರಿಗಳನ್ನು ಕೇಳಿದ್ದು ನಿಜ. ಆದರೆ 10 ಕುರಿಗಳನ್ನು ಕೇಳಿಲ್ಲ ಎಂದು ಸ್ಪಷ್ಟನೆ ಕ ನೀಡಿದ್ದಾರೆ.

ಸರಸ, ಸಲ್ಲಾಪ: ಬಿಲ್ ಕಲೆಕ್ಟರ್ ಬಂಧನ

ಕೆಜಿಎಫ್: ರಾಮಸಾಗರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮಹಿಳಾ ಸಿಬ್ಬಂದಿ ಜತೆ ಖಾಸಗಿ ಕ್ಷಣಗಳನ್ನು ಚಿತ್ರೀಕರಿಸಿ ಹಂಚಿದ ಆರೋಪ ಎದುರಿಸುತ್ತಿರುವ ಬಿಲ್ ಕಲೆಕ್ಟರ್ ಅರ್ಜುನ್ ಹರಿಕೃಷ್ಣ ಅವರನ್ನು ಬೇತಮಂಗಲ ಪೊಲೀಸರು ಸೋಮವಾರ ರಾತ್ರಿ ಬಂಧಿಸಿದ್ದಾರೆ.

ಪೊಲೀಸರು ಆರೋಪಿಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದು, ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಗ್ರಾಮ ಪಂಚಾಯಿತಿಯ ಕಚೇರಿಯ ಮೊದಲ ಮಹಡಿಯ ಕೊಠಡಿಯಲ್ಲಿ ಸಿಸಿಟಿವಿ ಸಂಪರ್ಕ ಕಡಿತಗೊಳಿಸಿದ ಆರೋಪಿಯು ಖಾಸಗಿ ಕ್ಷಣಗಳನ್ನು ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದ. ಸಂತ್ರಸ್ತೆ ನೀಡಿದ ದೂರಿನ ಮೇಲೆ ಅರ್ಜುನ್ ವಿಚಾರಣೆ ನಡೆಸಿದ ಬೇತಮಂಗಲ ಪೊಲೀಸರು ನಂತರ ಆತನನ್ನು ಬಂಧಿಸಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿದರು.